**1ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ., ರವರ ನ್ಯಾಯಾಲಯ, ನಂಜನಗೂಡು**

**ಸಿ.ಸಿಃ 258/2015**

| | | | |
|---|---|---|---|
| ಸಾಕ್ಷಿದಾರರ ಹೆಸರು | | **ನಟರಾಜು** | ಪ್ರಾಸಾಃ 3 |
| ತಂದೆಯ/ಗಂಡನ ಹೆಸರು | | ಮಲ್ಲಿಕಾರ್ಜುನಪ್ಪ | ಚಾಸಾಃ 4 |
| ವಯಸ್ಸು | | 42 ವರ್ಷ | |
| ಕೆಲಸ | | ವ್ಯವಸಾಯ | ಸಾ ಪ್ರ ಬೋ |
| ವಾಸ | | ಹೊಸಕೋಟೆ ಗ್ರಾಮ | ದಿಃ 21/09/2022 |

**ಮುಖ್ಯ ವಿಚಾರಣೆ ಮಾನ್ಯ ಎ.ಪಿ.ಪಿ.ಯವರಿಂದಃ**

ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ. ಪೊಲೀಸರ ಮುಂದೆ ಯಾವುದೇ ಹೇಳಿಕೆ ನೀಡಿಲ್ಲ. ಆರೋಪಿಯು ತನ್ನ ಬಸ್ ಕೆಎ-09-ಎಫ್-4923 ಸಾರಿಗೆ ಬಸ್ ಅನ್ನು ಅತಿವೇಗ ಮತ್ತು ಅಡ್ಡಾದಿಡ್ಡಿಯಾಗಿ ಚಾಲನೆ ಮಾಡಿರುವ ವಿಚಾರ ನನಗೆ ಗೊತ್ತಿಲ್ಲ. ಚಾಸಾ-2 ರವರ ಮೇಲೆ ಬಸ್ ಅನ್ನು ಹತ್ತಿಸುವಂತೆ ನಟಿಸಿ, ಬಸ್ಸ್ ಅನ್ನು ನಿಲ್ಲಿಸಿ ಇಳಿದು ಆರೋಪಿಯು ಏಕಾಏಕಿ ಏಕೆ ಹುರುಳಿಗಿಡಗಳನ್ನು ಹಾಕಿದ್ದೀರಾ ಎಂದು ಚಾಸಾ-2 ರವರಿಗೆ ಅವಾಚ್ಯ ಶಬ್ದಗಳಿಂದ ಬೈದಿಲ್ಲ. ಕೈಗಳಿಂದ ಮೈಕೈಗೆ ಹೊಡೆದಿರುವ ವಿಚಾರ ನನಗೆ ಗೊತ್ತಿಲ್ಲ. ಚಾಸಾ-1 ರವರಿಗೆ ಆರೋಪಿಯು ಬಸ್ ಅನ್ನು ಹತ್ತಿಸುತ್ತೇನೆ ಎಂದು ನನಗೆ ಕೊಲೆ ಬೆದರಿಕೆ ಹಾಕಿರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯು ಪ್ರತಿಕೂಲ ಸಾಕ್ಷಿ ನುಡಿಯುತ್ತಿದ್ದಾರೆ. ಮಾನ್ಯ ಎ.ಪಿ.ಪಿ.ಯವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಅನುಮತಿ ನೀಡಲಾಯಿತು)

**ಪಾಟೀ ಸವಾಲುಃ ಶ್ರೀ. ಎ.ಪಿ.ಪಿ.ಯವರಿಂದಃ**

ದಿನಾಂಕ 08.01.214 ರಂದು ಮಧ್ಯಾಹ್ನ 1.15 ಗಂಟೆ ಸಮಯದಲ್ಲಿ ಹೊಸಕೋಟೆ ಗ್ರಾಮದ ಚಾಸಾ-2 ರವರ ಮನೆಯ ಮುಂಭಾಗ ಸುತ್ತೂರು-ಮೈಸೂರು ಮುಖ್ಯ ರಸ್ತೆಯಲ್ಲಿ ಚಾಸಾ-2 ರವರು ಹುರುಳಿಗಿಡಗಳನ್ನು ಹಾಕಿದ್ದು ಆರೋಪಿಯು ತನ್ನ ಬಸ್ ಕೆಎ-09-ಎಫ್-4923 ಸಾರಿಗೆ ಬಸ್ ಅನ್ನು ಅತಿವೇಗ ಮತ್ತು ಅಡ್ಡಾದಿಡ್ಡಿಯಾಗಿ ಚಾಲನೆ ಮಾಡಿರುತ್ತಾರೆ ಎಂದರೆ ಸರಿಯಲ್ಲ. ಚಾಸಾ-2 ರವರ ಮೇಲೆ ಬಸ್ ಅನ್ನು ಹತ್ತಿಸುವಂತೆ ನಟಿಸಿ, ಬಸ್ಸಿನಿಂದ ಇಳಿದು ಆರೋಪಿ ಏಕಾಏಕಿ ಏಕೆ ಹುರುಳಿಗಿಡಗಳನ್ನು ಹಾಕಿದ್ದೀರಾ ಎಂದು ಚಾಸಾ-2 ರವರಿಗೆ ಅವಾಚ್ಯ ಶಬ್ದಗಳಿಂದ ಬೈದಿರುತ್ತಾರೆ ಎಂದರೆ ಸರಿಯಲ್ಲ. ಕೈಗಳಿಂದ ಮೈಕೈಗೆ ಹೊಡೆದಿರುತ್ತಾರೆ ಎಂದರೆ ಸರಿಯಲ್ಲ. ಈ ವಿಚಾರವನ್ನು ಚಾಸಾ-1 ರವರು ಕೇಳಲು ಹೋದಾಗ ಆರೋಪಿಯು ಬಸ್ ಅನ್ನು ಹತ್ತಿಸುತ್ತೇನೆ ಎಂದು ಚಾಸಾ-1 ರವರಿಗ ಕೊಲೆ ಬೆದರಿಕೆ ಹಾಕಿರುತ್ತಾರೆ ಎಂದರೆ ಸರಿಯಲ್ಲ. ಇದೇ ವಿಚಾರವಾಗಿ ದಿನಾಂಕ 25.01.2014 ರಂದು ಈಗ ನನಗೆ ಓದಿ ಹೇಳಿದಂತೆ " ದಿನಾಂಕ 08.01.2014 ರಂದು -------- ನೋಡಿದರೆ ಗುರುತಿಸುತ್ತೇನೆ" ಎಂದು ಪೊಲೀಸರ ಮುಂದೆ ಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಅಲ್ಲಗಳೆದ ಹೇಳಿಕೆಯ ಭಾಗವನ್ನು ನಿಪಿ-7 ಎಂದು ಗುರುತಿಸಲಾಯಿತು. ಈ ಮೇಲಿನ ಎಲ್ಲಾ ವಿಚಾರಗಳು ಗೊತ್ತಿದ್ದರೂ ಕೂಡ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ** ಆರೋಪಿ ಪರ ವಕೀಲರಿಂದ ಇಲ್ಲ ಎಂದು ತಿಳಿಸಿರುತ್ತಾರೆ.

ನನ್ನ ಉಕ್ತಲೇಖನದ ಮೇರೆಗೆ ತೆರದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.

**ಓ ಹೇ ಕೇ ಸ ಇದೆ ಎಂ ಒ**

ಸಹಿ/-

**1 ನೇ ಹೆಚ್ಚುವರಿ ಸಿ.ಜೆ ಮತ್ತು ಪ್ರದನ್ಯಾದಂ**

**ನಂಜನಗೂಡು**